ಆಕಾಶವಾಣಿ

ಪ್ರದೇಶ ಸಮಾಚಾರ

ಓದುತ್ತಿರುವವರು ರವಿ ಕುಲಕರ್ಣಿ **26-11-25**

ಮುಖ್ಯಾಂಶಗಳು

- ಡಿಸೆಂಬರ್ 8 ರಿಂದ 19 ರವರೆಗೆ ಬೆಳಗಾವಿ ಸುವರ್ಣಸೌಧದಲ್ಲಿ ವಿಧಾನ ಮಂಡಲ ಅಧಿವೇಶನ: ಸರ್ವ ರೀತಿಯ ವ್ಯವಸ್ಥೆಗೆ ವಿಧಾನಸಭಾಧ್ಯಕ್ಷರ ಸೂಚನೆ.
- ರಾಜ್ಯದ ಮಹಿಳೆಯರಿಗೆ, ಸುರಕ್ಷತೆ ಖಾತ್ರಿ ಪಡಿಸಲು, ಇದೇ 28 ರಂದು ರಾಜ್ಯಾದ್ಯಂತ, 'ಅಕ್ಕಾ ಪಡೆ' ಆರಂಭ.
- ರಾಜ್ಯದಲ್ಲಿ 3,000 ಲೈನ್‌ಮನ್‌ಗಳ ನೇಮಕಾತಿ ಪ್ರಕ್ರಿಯೆ ಪೂರ್ಣ: ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕ ಪಂಕಜ್ ಕುಮಾರ್ ಪಾಂಡೆ ಮಾಹಿತಿ.
- ಹಲವು ವಿಧಾಯಕ ಕಾರ್ಯಕ್ರಮಗಳ ಮೂಲಕ ಇಂದು ರಾಜ್ಯಾದ್ಯಂತ ಸಂವಿಧಾನ ದಿನ ಆಚರಣೆ.

ಈಗ ವಾರ್ತೆಗಳ ವಿವರ

*******

ಡಿಸೆಂಬರ್ 8 ರಿಂದ 19 ರವರೆಗೆ ಬೆಳಗಾವಿ ಸುವರ್ಣಸೌಧದಲ್ಲಿ ವಿಧಾನ ಮಂಡಲ ಅಧಿವೇಶನ ನಡೆಯಲಿದೆ ಎಂದು ವಿಧಾನಸಭಾ ಸ್ಪೀಕರ್ ಯು.ಟಿ.ಖಾದರ್ ಹೇಳಿದ್ದಾರೆ. ಮಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಧಿವೇಶನ ನಡೆಸಲು ಪೂರಕವಾಗಿ ಸರ್ವ ರೀತಿಯ ವ್ಯವಸ್ಥೆ ಮಾಡಲು ಈಗಾಗಲೇ ಸೂಚನೆ ನೀಡಲಾಗಿದೆ. ಪ್ರತಿಭಟನೆ, ಬೇಡಿಕೆ ಸಲ್ಲಿಸುವವರಿಗೂ ಪ್ರತ್ಯೇಕವಾಗಿ ಸ್ಥಳ ನಿಗದಿ ಮಾಡಲಾಗಿದೆ ಎಂದರು. ಅಧಿವೇಶನದ ಸಂದರ್ಭ ಸ್ಥಳೀಯ ಜನರಿಗೆ ಉಂಟಾಗುವ ತೊಂದರೆಯನ್ನು ಆದ ಷ್ಟ ಕಡಿಮೆ ಮಾಡುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ. ಸುವರ್ಣ ಸೌಧದಲ್ಲಿ ಹೊಸದಾಗಿ ನಿರ್ಮಾಣವಾಗಿರುವ ಉದ್ಯಾನವನ ಉದ್ಘಾಟನೆ ಹಾಗೂ ಜಗತ್ತಿನ ಎರಡನೇ ಅತಿ ಉದ್ದದ ಭಾರತೀಯ ರಾ ಷ್ಟ್ರಧ್ವಜ ಪ್ರದರ್ಶನ ಆಯೋಜಿಸಲಾಗಿದೆ ಎಂದು ಸಭಾಧ್ಯಕ್ಷರು ಹೇಳಿದರು.

*******

ರಾಜ್ಯದ ಮಹಿಳೆಯರಿಗೆ, ಸುರಕ್ಷತೆ ಖಾತ್ರಿ ಪಡಿಸಲು, ಇದೇ 28ರಂದು ರಾಜ್ಯಾದ್ಯಂತ, 'ಅಕ್ಕಾ ಪಡೆ' ಆರಂಭಿಸಲಾಗುತ್ತಿದೆ. ಶಾಲಾ ಕಾಲೇಜು, ಪಾರ್ಕ್, ಶಾಪಿಂಗ್ ಮಾಲ್ ಸೇರಿದಂತೆ, ಸಾರ್ವಜನಿಕ ಸ್ಥಳಗಳಲ್ಲಿ 'ಅಕ್ಕಾ ಪಡೆ', ಗಸ್ತು ತಿರುಗಲಿದ್ದು, ಮಹಿಳೆಯರಿಗೆ ಅಗತ್ಯ ಸಹಾಯ ಒದಗಿಸಲಿದೆ ಎಂದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ ತಿಳಿಸಿದ್ದಾರೆ. ಕೋಲಾರ ನಗರದ ಜಿಲ್ಲಾಡಳಿತ ಭವನದಲ್ಲಿ, ಐ.ಸಿ.ಡಿ.ಎಸ್. ಯೋಜನೆಯ, ಸುವರ್ಣ ಮಹೋತ್ಸವ 'ಅಕ್ಕಾ ಪಡೆ' ಲೋಕಾರ್ಪಣೆಯ, ಪೂರ್ವಭಾವಿ ಸಭೆಗೆ, ಚಾಲನೆ ನೀಡಿ ಮಾತನಾಡಿದ ಅವರು, ಮುಂಬರುವ ಮೂರು ತಿಂಗಳಲ್ಲಿ, ಗೃಹ ಲಕ್ಷ್ಮೀ ಸೊಸೈಟಿಯನ್ನು ಜಿಲ್ಲಾ ಮಟ್ಟಕ್ಕೆ ವಿಸ್ತರಿಸಲಾಗುವುದು ಎಂದು ಸಚಿವರು ತಿಳಿಸಿದರು.

*******

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲ್ಲೂಕಿನ ಘಾಟಿ ಸುಬ್ರಹ್ಮಣ್ಯ ಕ್ಷೇತ್ರದ ಅಭಿವೃದ್ಧಿಗೆ 29 ಕೋಟಿ ರೂ.ಗಳ ಆಡಳಿತಾತ್ಮಕ ಅನುಮೋದನೆ ದೊರಕಿದೆ ಎಂದು ಮುಜರಾಯಿ ಇಲಾಖೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿ ಈ ವಿಷಯ ತಿಳಿಸಿದ ಅವರು, ಕ್ಷೇತ್ರದಲ್ಲಿ ಡಿಸೆಂಬರ್ 25 ರಂದು ನಡೆಯಲಿರುವ ಸುಬ್ರಹ್ಮಣ್ಯ ಸ್ವಾಮಿ ಬ್ರಹ್ಮ ರಥೋತ್ಸವಕ್ಕೆ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗುತ್ತಿದೆ ಎಂದರು. ಘಾಟಿ ಸುಬ್ರಹ್ಮಣ್ಯ ದೇವಾಲಯಕ್ಕೆ ಪ್ರತಿ ವ ರ್ಷ ಸುಮಾರು 25 ಲಕ್ಷಕ್ಕಿಂತ ಹೆಚ್ಚಿನ ಭಕ್ತರು ಬರುತ್ತಾರೆ. ಹಾಗಾಗಿ ಹದಿನಾರು ಕೋಟಿ ರೂಪಾಯಿ ವೆಚ್ಚದಲ್ಲಿ 2ಸಾವಿರ ಭಕ್ತಾದಿಗಳು ಒಂದೇ ಸಮಯದಲ್ಲಿ ಕುಳಿತು ಊಟ ಮಾಡುವಂತಹ ದಾಸೋಹ ಭವನ ನಿರ್ಮಿಸಲಾಗುವುದು. ಕ್ಷೇತ್ರದಲ್ಲಿ ರಥ ಬೀದಿ, ಅತಿಥಿ ಗೃಹ, ದೇವಾಲಯ ನವೀಕರಣ, ಮೊದಲಾದ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲು ಸಭೆಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ಎಂದರು.

*******

ರಾಜ್ಯದಲ್ಲಿ 3,000 ಲೈನ್‌ಮನ್‌ಗಳ ನೇಮಕಾತಿ ಪ್ರಕ್ರಿಯೆ ಮುಗಿದಿದ್ದು, ಆಯ್ಕೆಯಾದ ಅಭ್ಯರ್ಥಿಗಳ ವೈದ್ಯಕೀಯ ತಪಾಸಣೆ ನಡೆಯುತ್ತಿದೆ ಎಂದು ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕ ಪಂಕಜ್ ಕುಮಾರ್ ಪಾಂಡೆ ತಿಳಿಸಿದ್ದಾರೆ. ಯಾದಗಿರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ವ ೯ ಎಇ, ಜೆಇ ಸೇರಿ 1,500 ಹುದ್ದೆಗಳು ಭರ್ತಿಯಾಗಿ ನೇಮಕಗೊಂಡ ಅಭ್ಯರ್ಥಿಗಳು ಕೆಲಸಕ್ಕೂ ಹಾಜರಾಗಿದ್ದಾರೆ. ಲೈನ್‌ಮನ್‌ಗಳ ಆಯ್ಕೆ ಪ್ರಕ್ರಿಯ ಕೊನೆಯ ಹಂತದಲ್ಲಿದೆ. ಜೆಸ್ಕಾಂನಲ್ಲಿ ಕೆಲವೆಡೆ ಹೆಚ್ಚು, ಮತ್ತೆ ಕೆಲವೆಡೆ ಕಡಿಮೆ ಸಂಖ್ಯೆಯ ಹುದ್ದೆಗಳು ಖಾಲಿ ಇವೆ. ಹುದ್ದೆಗಳನ್ನು ನೋಡಿಕೊಂಡು ಸಿಬ್ಬಂದಿ ಹಂಚಿಕೆ ಮಾಡಲಾಗುವುದು ಎಂದರು. ಹೊಸ ವಿದ್ಯುತ್ ಉಪವಿಭಾಗಗಳನ್ನು ಸ್ಥಾಪಿಸುವ ಬಗ್ಗೆ ಚರ್ಚೆಯಾಗಿದ್ದು, ಮಾರ್ಗದರ್ಶಿಗಳನ್ನೂ ಸಿದ್ಧಪಡಿಸಲಾಗಿದೆ. ವೇಗದ ಬೆಳವಣಿಗೆ, ಹೆಚ್ಚಿನ ಸಂಪರ್ಕಗಳು, ರೈತರ ವ್ಯಾಪಕ ಬೇಡಿಕೆ ಇರುವ ಸ್ಥಳವನ್ನು ನೋಡಿಕೊಂಡು ಸ್ಥಾಪನೆ ಮಾಡಲಾಗುವುದು ಎಂದು ಅವರು ಹೇಳಿದರು.

*******

ಹಲವು ವಿಧಾಯಕ ಕಾರ್ಯಕ್ರಮಗಳ ಮೂಲಕ ರಾಜ್ಯಾದ್ಯಂತ ಇಂದು ಸಂವಿಧಾನ ದಿನ ಆಚರಿಸಲಾಗುತ್ತಿದೆ. ಬೆಂಗಳೂರಿನ, ವಸಂತ ನಗರದ ಬಿ.ಆರ್ ಅಂಬೇಡ್ಕರ್ ಭವನದಲ್ಲಿ ಆಯೋಜಿತ, ಪ್ರಧಾನ ಕಾರ್ಯಕ್ರಮದಲ್ಲಿ, ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಹಾಗೂ ಸಮಾಜ ಕಲ್ಯಾಣ ಖಾತೆ ಸಚಿವರು ಸೇರಿದಂತೆ, ಗಣ್ಯರು ಪಾಲ್ಗೊಳ್ಳಲಿದ್ದಾರೆ. ಗುಲಬರ್ಗಾ ವಿಶ್ವವಿದ್ಯಾಲಯದ, ಮಹಾತ್ಮ ಗಾಂಧಿ ಸಭಾಂಗಣದಲ್ಲಿ, 76ನೇ ಸಂವಿಧಾನ ದಿನಾಚರಣೆ ಅಂಗವಾಗಿ, ಇಂದು ಬೆಳಗ್ಗೆ 10.30 ಕ್ಕೆ, ರಾಷ್ಟ್ರೀಯ ವಿಚಾರ ಸಂಕಿರಣ ಆಯೋಜಿಸಲಾಗಿದೆ. ಹೈದ್ರಾಬಾದ್ ಕೇಂದ್ರೀಯ ವಿಶ್ವವಿದ್ಯಾಲಯದ, ಬಿ.ಆರ್. ಅಂಬೇಡ್ಕರ್ ಅಧ್ಯಯನ ಕೇಂದ್ರದ ನಿರ್ದೇಶಕ, ಕೆ.ವಾಯ್.ರತ್ನಮ್, ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಧಾರವಾಡ ಜಿಲ್ಲೆ, ಕುಂದಗೋಳದ ಸವಾಯಿ ಗಂಧರ್ವ ಸಭಾಭವನದಲ್ಲಿ, ಬೆಳಗ್ಗೆ 9.30ಕ್ಕೆ ಸಂವಿಧಾನ ದಿನಾಚರಣೆ ಕಾರ್ಯಕ್ರಮ ಆಯೋಜಿತವಾಗಿದೆ. ಕಾರ್ಯಕ್ರಮಕ್ಕೂ ಮೊದಲು, ಸಂವಿಧಾನ ಹಾಗೂ ಪೀಠಿಕೆಯ ಶೋಭಾ ಯಾತ್ರೆ ಜರುಗಲಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಇಂದು ಜಿಲ್ಲಾ ಮಟ್ಟದ ಸಂವಿಧಾನ ದಿನಾಚರಣೆ ಹಮ್ಮಿಕೊಳ್ಳಲಾಗಿದೆ. ತಹಶೀಲ್ದಾರ್ ಕಛೇರಿ ಆವರಣದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಡಾ.ಬಾಬು ಜಗಜೀವನರಾಮ್ ಪ್ರತಿಮೆಗಳಿಗೆ ಪು ಷ್ಪಾರ್ಚನೆ ಸಲ್ಲಿಸಿ ನಂತರ ತಹಶೀಲ್ದಾರ್ ಕಛೇರಿ ಆವರಣದಿಂದ ಡಾ.ಬಿ.ಆರ್.ಅಂಬೇಡ್ಕರ್ ಭವನದವರೆಗೆ ಜಾಥಾ ನಡೆಯಲಿದೆ. ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. (43)

*******

ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..

ಪ್ರಕಟಣೆ–32 ಸೆಕೆಂಡ್ಸ್

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಗೋವಾದಲ್ಲಿ ಆಯೋಜಿತ, ಭಾರತದ 56 ನೇ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ಈ ತಿಂಗಳ 22 ರಿಂದ ಆರಂಭಗೊಂಡಿದ್ದು, 28 ರಂದು ಮುಕ್ತಾಯಗೊಳ್ಳಲಿದೆ. ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿನ ವೇವ್ಸ್ ಬಜಾರ್, ಪನೋರಮ– ಭಾರತೀಯ ಸಿನಿಮಾಗಳ ಪ್ರದರ್ಶನ ಸೇರಿದಂತೆ, ಉತ್ಸವದ ವಿಶೇಷತೆಗಳ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಹಿರಿಯ ಪತ್ರಕರ್ತ ಪ್ರೇಮ ಕುಮಾರ ಹರಿಯಬ್ಬೆ..

ಧ್ವನಿ–ಪ್ರೇಮ ಕುಮಾರ ಹರಿಯಬ್ಬೆ– 32 ಸೆಕೆಂಡ್ಸ್

*******

ಶ್ರೀಲಂಕಾ ರಾಜಧಾನಿ ಕೊಲಂಬೋದಲ್ಲಿ ಜರುಗಿದ, ಅಂಧ ಮಹಿಳೆಯರ ಟಿ – 20 ಕ್ರಿಕೆಟ್ ವಿಶ್ವಕಪ್ ಫೈನಲ್ ಪಂದ್ಯದಲ್ಲಿ, ವಿಜಯಿಯಾದ ತಂಡದಲ್ಲಿ ರಾಜ್ಯದ ಮೂವರು ಆಟಗಾರ್ತಿಯರಿದ್ದು, ವಿಶ್ವಕಪ್ ಗೆಲುವಿನಲ್ಲಿ ಅವರ ಕೊಡುಗೆ ವಿಶಿಷ್ಟವಾಗಿತ್ತು. ವಿಶ್ವಕಪ್ ಟ್ರೋಫಿಯೊಂದಿಗೆ ಸಂಭ್ರಮದೊಂದಿಗೆ ಸ್ವದೇಶಕ್ಕೆ ತಂಡ ಮರಳಿದ್ದು, ಶಿವಮೊಗ್ಗ ಜಿಲ್ಲೆ ರಿಪ್ಪನ್ ಪೇಟೆ, ಬರುವೆ

ಗ್ರಾಮದ, ವಿ.ಕಾವ್ಯಾ, ಭಾರತೀಯ ಮಹಿಳಾ ಅಂಧರ ಕ್ರಿಕೆಟ್ ತಂಡದ ಆಲ್‌ರೌಂಡರ್ ಆಗಿದ್ದು, ಗೆಲುವಿನ ಕುರಿತು ಕಾವ್ಯಾ ತಮ್ಮ ಸಂತಸ ಹಂಚಿಕೊಂಡಿದ್ದಾರೆ.
ಧ್ವನಿ–ವಿ.ಕಾವ್ಯಾ– 27 ಸೆಕೆಂದುಗಳು

*******

ರಾಜ್ಯ ಖನಿಜ ನಿಗಮದ ವ್ಯವಸ್ಥಾಪಕ ನಿರ್ದೇಶಕರಾಗಿದ್ದ, ಹಿರಿಯ ಐಎಎಸ್ ಅಧಿಕಾರಿ ಮಹಾಂತೇಶ್ ಬೀಳಗಿ ಪ್ರಯಾಣಿಸುತ್ತಿದ್ದ ಕಾರು ಅಪಘಾತಕ್ಕೀಡಾಗಿ, ದುರ್ಘಟನೆಯಲ್ಲಿ ಮಹಾಂತೇಶ್ ಬೀಳಗಿ ಸೇರಿದಂತೆ ಮೂವರು ಸಾವನ್ನಪ್ಪಿದ್ದಾರೆ. ದುರ್ಘಟನೆಯಲ್ಲಿ ಮಹಾಂತೇಶ್ ಸೋದರರಾದ ಶಂಕರ ಬೀಳಗಿ ಹಾಗೂ ಈರಣ್ಣ ಶಿರಸಂಗಿ ಅವರೂ ಸಾವನ್ನಪ್ಪಿದ್ದು, ಸಂಬಂಧಿಕರ ವಿವಾಹ ಕಾರ್ಯಕ್ರಮಕ್ಕೆಂದು ವಿಜಯಪುರದಿಂದ ಕಲಬುರಗಿಗೆ ತೆರಳುತ್ತಿದ್ದ ವೇಳೆ ಜೇವರ್ಗಿ ತಾಲೂಕಿನ ಗೌನಳ್ಳಿ ಕ್ರಾಸ್ ಬಳಿ ಈ ಅಪಘಾತ ಸಂಭವಿಸಿದೆ. ಹಿರಿಯ ಐಎಎಸ್ ಅಧಿಕಾರಿ ಮಹಾಂತೇಶ್ ಬೀಳಗಿ ಅವರು ರಸ್ತೆ ಅಪಘಾತದಲ್ಲಿ ನಿಧನರಾದ ಸುದ್ದಿ ನೋವುಂಟು ಮಾಡಿದೆ. ಅವರು ಕರ್ತವ್ಯ ನಿರ್ವಹಿಸುತ್ತಿದ್ದ ಎಲ್ಲ ಕಡೆಗಳಲ್ಲಿಯೂ ತಮ್ಮ ದಕ್ಷತೆಯಿಂದಾಗಿ ಹೆಜ್ಜೆ ಗುರುತುಗಳನ್ನು ಉಳಿಸಿ ಹೋಗಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಂತಾಪ ಸೂಚಿಸಿದ್ದಾರೆ. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ಕೇಂದ್ರ ಸಚಿವ ಪ್ರಲ್ಹಾದ ಜೋಶಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸೇರಿದಂತೆ ಹಲವು ಗಣ್ಯರು ಮಹಾಂತೇಶ ಬೀಳಗಿ ಅವರ ನಿಧನಕ್ಕೆ ತೀವ್ರ ಶೋಕ ವ್ಯಕ್ತಪಡಿಸಿದ್ದಾರೆ.

*******